**ದಿನಾಂಕ: 04-02-2023 ರಂದು ಬೆಳಗ್ಗೆ 11:00 ಗಂಟೆಗೆ ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ಗಣೇಶ ಮಂದಿರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

| | |
|---|---|
| 1. ಶ್ರೀ. ಯತೀಶ್. ಎ. ಜೆ | - ನೋಡೆಲ್ ಅಧಿಕಾರಿ ಮತ್ತು ಸ.ಕಾ.ನಿ.ಅ (ಬನಶಂಕರಿ) ಉಪವಿಭಾಗ |
| 2. ಶ್ರೀ. ಮೋಹಿತ್. ಆರ್ | - ಸಹಾಯಕ ಅಭಿಯಂತರರು (ಕಿಯೋನಿಕ್ಸ್) |
| 3. ಶ್ರೀ. ಪವನ್ | - ಕಿರಿಯ ಆರೋಗ್ಯ ಪರಿವೀಕ್ಷಕರು |
| 4. ಶ್ರೀಮತಿ. ಕವಿತ | - ಹಿರಿಯ ಆರೋಗ್ಯ ಪರಿವೀಕ್ಷಕರು |

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದ 24ನೇ ಅಡ್ಡರಸ್ತೆಯಲ್ಲಿ ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿರುತ್ತಾರೆ. ಇದರಿಂದ ಸದರಿ ರಸ್ತೆಯಲ್ಲಿ ಪಾದಚಾರಿಗಳಿಗೆ ಓಡಾಡಲು ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸದರಿ ಪಾದಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಿಕೊಡಲು ಸಾರ್ವಜನಿಕರು ಕೋರಿದರು.

ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದ 21ನೇ ಮುಖ್ಯರಸ್ತೆಯ ಪಾದಚಾರಿ ಮಾರ್ಗದಮೇಲೆ ಬಾರ್ಬಿಕ್ಯೂ ವಾಹನವನ್ನು ನಿಲ್ಲಿಸಿಕೊಂಡು ವ್ಯಾಪಾರ ಮಾಡುತ್ತಿರುತ್ತಾರೆ. ಇದರಿಂದ ಸದರಿ ರಸ್ತೆಯಲ್ಲಿ ಪಾದಚಾರಿಗಳಿಗೆ ಓಡಾಡಲು ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸದರಿ ಪಾದಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಿಕೊಡಲು ಸಾರ್ವಜನಿಕರು ಕೋರಿದರು.

ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದ 21ನೇ ಮುಖ್ಯರಸ್ತೆಯಲ್ಲಿ ಮರವಿದ್ದು ಸದರಿ ಮರದ ರೆಂಬೆ ಕೊಂಬೆಗಳು ಮನೆಯೊಳಗೆ ಬಂದಿರುತ್ತದೆ. ಆದ್ದರಿಂದ ಸದರಿ ಮರದ ರೆಂಬೆಕೊಬೆಗಳನ್ನು ತೆರವುಗೊಳಿಸಲು ಸಾರ್ವಜನಿಕರು ಕೋರಿದರು.

ವಾರ್ಡ್ ವ್ಯಾಪ್ತಿಯ ವಸತಿ ಪ್ರದೇಶಗಳಲ್ಲಿ ವಾಣಿಜ್ಯ ಚಟುವಟಕೆಗಳನ್ನು ನಡೆಸುತ್ತಿರುತ್ತಾರೆ. ಅದರಿಂದ ಹತ್ತಿರ ಇರುವ ಮನೆಗಳಲ್ಲಿ ವಾಸಿಸುವ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುತ್ತದೆ. ಆದ್ದರಿಂದ ಸದರಿ ವಸತಿ ಪ್ರದೇಶಗಳಲ್ಲಿ ವಾಣಿಜ್ಯ ಚಟುವಟಿಗಳನ್ನು ನಿರ್ವಹಿಸದಂತೆ ಕ್ರಮ ವಹಿಸಬೇಕೆಂದು ಸಾರ್ವಜನಿಕರು ಕೋರಿದರು.

ವಾರ್ಡ್ ವ್ಯಾಪ್ತಿಯಲ್ಲಿ ಬನಶಂಕರಿ 2ನೇ ಹಂತದ 22ನೇ ಮುಖ್ಯರಸ್ತೆಯಲ್ಲಿ ಚರಂಡಿಯನ್ನು ತೆರದಿದ್ದು ಸದರಿ ಚರಂಡಿಯನ್ನು ಎಸ್‌ಎಸ್‌ಎಂ ಕಟ್ಟಡ ಕಟ್ಟಿ ಮುಚ್ಚುವಂತೆ ಸಾರ್ವಜನಿಕರು ಕೋರಿದರು.

ಪು.ತಿ.ನೋ

ವಾರ್ಡ್ ವ್ಯಾಪ್ತಿಯ ದೇವೆಗೌಡ ಪೆಟ್ರೋಲ್ ಬಂಕ್ ಬಳಿ ಇರುವ 30ನೇ ಮುಖ್ಯರಸ್ತೆಯು ತುಂಬಾ ಹಾಳಾಗಿದ್ದು ಸದರಿ ರಸ್ತೆಗೆ ಡಾಂಬರೀಕರಣ ಮಾಡಿಕೊಡಬೇಕೆಂದು ಸಾರ್ವಜನಿಕರು ಕೋರಿದರು. ಅದರಂತೆ ಸದರಿ ರಸ್ತೆಗೆ ಡಾಂಬರೀಕರಣ ಮಾಡಲು ಕ್ರಮ ಕೈಗೊಳ್ಳುವಂತೆ ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ ರವರಿಗೆ ತಿಳಿಸಲಾಯಿತು.

ವಾರ್ಡ್ ವ್ಯಾಪ್ತಿಯ 24ನೇ ಅಡ್ಡರಸ್ತೆಯ ಬಲಭಾಗದಲ್ಲಿ ದರ್ಬಾರ್ ಹೋಟೆಲ್ ನಿಂದ 21ನೇ ಮುಖ್ಯರಸ್ತೆಯವರೆಗೆ ಹಾಗೂ 21ನೇ ಮುಖ್ಯರಸ್ತೆಯಲ್ಲಿ ನೇತ್ರಾಲಯ ದಿಂದ 22ನೇ ಅಡ್ಡರಸ್ತೆಯವರೆಗೆ ಹೊಸದಾಗಿ ಚರಂಡಿಯನ್ನು ನಿರ್ಮಿಸಿಕೊಡುವಂತೆ ಸಾರ್ವಜನಿಕರು ಕೋರಿದರು.

ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ರಲ್ಲಿನ ಎಲ್ಲಾ ಭಾಗಗಳಲ್ಲಿ ಘನತ್ಯಾಜ್ಯ ವಿಲೇವಾರಿ ಕಾರ್ಯ, ಸಿವಿಲ್ ಕಾಮಗಾರಿಗಳು ಹಾಗೂ ಇನ್ನಿತರೆ ಕೆಲಸ ಕಾರ್ಯಗಳು ಸಮರ್ಪಕವಾಗಿ ನಡೆಯುತ್ತಿರುತ್ತದೆ ಎಂದು ಸಮಿತಿ ಸದಸ್ಯರು ಅಭಿಪ್ರಾಯಿಸಿದರು.

ವಾರ್ಡ್ ಸಮಿತಿ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಾರ್ವಜನಿಕರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಶ್ರೀ. ಯತೀಶ್. ಎ. ಜೆ, ನೋಡೆಲ್ ಅಧಿಕಾರಿ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ<br>
ವಾರ್ಡ್ ಸಂಖ್ಯೆ 165<br>
ಗಣೇಶ ಮಂದಿರ